# ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1465

02. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

03. ಉತ್ತರಿಸುವ ದಿನಾಂಕ : 19-03-2020

04. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಇತ್ತೀಚೆಗೆ ಬೆಂಗಳೂರು ನಗರದ ಕೆ.ಆರ್. ಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಡ್ರಗ್‌ಮಾಫಿಯಾ ತನ್ನ ಎಲ್ಲೆಯನ್ನು ಮೀರಿ ಬೆಳೆಯುತ್ತಿದ್ದು, ಪ್ರತಿಯೊಂದು ಗಲ್ಲಿ ಗಲ್ಲಿಗಳಲ್ಲಿಯೂ, ಸಣ್ಣ ಪುಟ್ಟ ದಿನಸಿ ಅಂಗಡಿಗಳಲ್ಲಿಯೂ ರಾಜಾರೋಷವಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕೆ.ಆರ್.ಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಕೆ.ಆರ್.ಪುರಂ, ಹೆಚ್.ಎ.ಎಲ್., ಮಹದೇವಪುರ, ರಾಮಮೂರ್ತಿನಗರ, ಹೆಣ್ಣೂರು ಮತ್ತು ಜೀವನ್ ಭೀಮ ನಗರ ಪೊಲೀಸ್ ಠಾಣೆಗಳು ಒಳಪಟ್ಟಿವೆ.<br>ಸದರಿ ಪೊಲೀಸ್ ಠಾಣಾ ವ್ಯಾಪ್ತಿಗಳ ಸಣ್ಣಪುಟ್ಟ ದಿನಸಿ ಅಂಗಡಿಗಳಲ್ಲಿ ಮಾದಕ ವಸ್ತುಗಳ ಮಾರಾಟ ಮಾಡಲು ಅವಕಾಶವಾಗದಂತೆ ಪೊಲೀಸ್ ಬಿಗಿ ಗಸ್ತು ಏರ್ಪಡಿಸಲಾಗಿದೆ ಹಾಗೂ ಈ ಬಗ್ಗೆ ಕಾನೂನು ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುತ್ತಿದೆ.<br>ಮಾದಕ ವಸ್ತುಗಳ ಸೇವನೆ ಮಾಡುವವರ ವಿರುದ್ಧ ಕಲಂ 27 (ಬಿ) ಎನ್.ಡಿ.ಪಿ.ಎಸ್ ಕಾಯ್ದೆ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ | ಈ ಡ್ರಗ್ ಮಾಫಿಯಾದ ಜಾಲದ ಬಗ್ಗೆ ಸ್ಥಳೀಯ ಪೊಲೀಸರಿಗೆ ಗೊತ್ತಿದ್ದರೂ ಕೂಡ ಅವರೇ ಕಾಣದ ಕೈಗಳಂತೆ ಕುಮ್ಮಕ್ಕು ನೀಡುತ್ತಿದ್ದಾರೆ ಎಂಬ ಆರೋಪಗಳು ಸಾರ್ವಜನಿಕರಿಂದ ಕೇಳಿಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪೊಲೀಸರು ಯಾವುದೇ ಮಾಫಿಯಾ ಜಾಲದ ಬಗ್ಗೆ ನೇರವಾಗಿ ಅಥವಾ ಪರೋಕ್ಷವಾಗಿ ಕುಮ್ಮಕ್ಕು ನೀಡಿರುವುದಿಲ್ಲ.<br>ಡ್ರಗ್ ಮಾಫಿಯಾ ಜಾಲದ ಬಗ್ಗೆ ಸ್ಥಳೀಯ ಪೊಲೀಸರಿಗೆ ದೂರು ಬಂದ ಕೂಡಲೇ ಪ್ರಕರಣ ದಾಖಲಿಸಿ, ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತಿದೆ. ಮಾದಕ ವಸ್ತುಗಳ ಸರಬರಾಜು, ಮಾರಾಟ, ಸೇವನೆ ಸೇರಿದಂತೆ ಡ್ರಗ್ಸ್ ಪೆಡ್ಲಿಂಗ್ ವಿಚಾರದಲ್ಲಿ ಶೂನ್ಯ ಸಹಿಷ್ಣುತೆ **(Zero Tolerance)** ಹೊಂದಿದ್ದು, ಮಾದಕ ವಸ್ತುಗಳ ಅಕ್ರಮಗಳ ನಿಯಂತ್ರಣಕ್ಕೆ ಸಮರೋಪಾದಿಯಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ | ಈ ಡ್ರಗ್ಸ್ ಜಾಲದಲ್ಲಿ ಯುವಕರಲ್ಲದೆ ಮುಗ್ಧ ಮನಸ್ಸಿನ ಶಾಲಾ ಮಕ್ಕಳು ಕೂಡ ಬಿದ್ದು ಗಂಭೀರ ಪರಿಣಾಮವನ್ನು ಅನುಭವಿಸುತ್ತಿರುವುದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಸೂಕ್ತ ವಿವರ ನೀಡುವುದು) | ➢ ಮಾದಕ ವಸ್ತುಗಳ ಮಾರಾಟದ ನಿಯಂತ್ರಣಕ್ಕಾಗಿ ಪೊಲೀಸ್ ಠಾಣಾ ಸರಹದ್ದಿನ ಪ್ರಮುಖ ಶಾಲೆಗಳ ಹತ್ತಿರ ಮಾದಕ ವಸ್ತುಗಳ ಮಾರಾಟಗಾರರ ಮಾಹಿತಿಯನ್ನು ಪಡೆಯುವ ಸಲುವಾಗಿ ದೂರು ಬಾಕ್ಸ್ ಅನ್ನು ಅಳವಡಿಸಿದ್ದು, ಆಗಾಗ ದೂರು ಬಾಕ್ಸ್ ಅನ್ನು ಪರಿಶೀಲಿಸಲಾಗುತ್ತಿದೆ. ಎಲ್ಲಾ ಶಾಲಾ ಕಾಲೇಜುಗಳ |

ಹತ್ತಿರ ಮಾದಕ ವಸ್ತುಗಳ ಸೇವನೆ ಮತ್ತು ಮಾರಾಟದ ಬಗ್ಗೆ ಎಚ್ಚರಿಕೆಯ ಸಂದೇಶ ಮತ್ತು ಸೇವನೆಯಿಂದ ಉಂಟಾಗುವಂತಹ ಪರಿಣಾಮದ ಬಗ್ಗೆ ಅಧಿಕಾರಿಗಳು ಹೊಯ್ಸಳ, ಚೀತಾ ವಾಹನಗಳು ಹಾಗೂ ಬೀಟ್ ಸಿಬ್ಬಂದಿಗಳಿಗೆ ಸೂಕ್ತ ತಿಳುವಳಿಕೆ ನೀಡಿ ಸಾರ್ವಜನಿಕರಲ್ಲಿ ಹಾಗೂ ಶಾಲೆ ಕಾಲೇಜುಗಳ ಬಳಿ, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ತಿಳುವಳಿಕೆಯ ಮಾಹಿತಿಯುಳ್ಳ ಪೋಸ್ಟರ್‌ಗಳನ್ನು ಅಂಟಿಸಲಾಗಿದೆ ಹಾಗೂ ಆಡಿಯೋ ವಿಡಿಯೋ ಮಾಧ್ಯಮದ ಮೂಲಕ ಶಾಲಾ ಕಾಲೇಜುಗಳ ಮಕ್ಕಳಿಗೆ ತೋರಿಸಿ ಈ ಬಗ್ಗೆ ಅರಿವು ಮೂಡಿಸಲಾಗಿದೆ.

➢ ಪ್ರತ್ಯೇಕ ಟೋಲ್ ಫ್ರೀ ನಂಬರ್ 1908 ದೂರವಾಣಿ ಸೇವೆಯನ್ನು ಕಾರ್ಯಾಚರಣೆಗೆ ಅಳವಡಿಸಲಾಗಿದೆ.

➢ ವಿದೇಶಿಯರು ವಿಶೇಷವಾಗಿ ನೈಜೀರಿಯನ್ಸ್ ಪ್ರಜೆಗಳು ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳ ಆರೋಪಿಗಳನ್ನು ದಸ್ತಗಿರಿ ಮಾಡಿ ಅವರ ಪಾಸ್ ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು, ಪಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವವರ ವಿರುದ್ಧ ಕಠಿಣ ಕಾನೂನಿನ ಕ್ರಮ ಕೈಗೊಳ್ಳಲಾಗುತ್ತಿದೆ. ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ.

➢ ಎನ್.ಡಿ.ಪಿ.ಎಸ್ ಕಾಯ್ದೆಯಡಿಯಲ್ಲಿ ದಾಖಲಾದ ಎಲ್ಲಾ ಆರೋಪಿಗಳ ವಿರುದ್ಧ ಎಂ.ಓ.ಬಿ ಅನ್ನು ತೆರೆಯಲಾಗುತ್ತಿದ್ದು ಮತ್ತು ಆರೋಪಿತನ ಪೂರ್ಣ ಮಾಹಿತಿಯನ್ನು ಒಳಗೊಂಡ ತನಿಖಾ ವರದಿಯನ್ನು ಸಂಗ್ರಹಿಸಿ ಇಡಲಾಗುತ್ತಿದೆ.

➢ ಮಾದಕ ವಸ್ತಗಳ ವ್ಯಸನಿಗಳನ್ನು ಗುರ್ತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮುಖಾಂತರ ಡಿ-ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮವಹಿಸಲಾಗುತ್ತಿದೆ.

➢ ಮಾದಕ ವಸ್ತು ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು ಹಾಗೂ ಪತ್ತೆ ಮಾಡಲು ಮತ್ತು ಹದಿಹರೆಯದ ಯುವಕ/ ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಜರುಗಿಸಲಾಗುತ್ತಿದೆ.

**ಒಇ 06 ಪಿಎನ್‌ಡಿ 2020**

**(ಬಸವರಾಜ ಬೊಮ್ಮಾಯಿ)**
**ಗೃಹ ಸಚಿವರು**